# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1397 (1583)
ಸದಸ್ಯರ ಹೆಸರು : ಶ್ರೀ ಗೋವಿಂದರಾಜು
ಉತ್ತರಿಸುವ ದಿನಾಂಕ : 18.03.2021
ಉತ್ತರಿಸುವ ಸಚಿವರು : ಮಾನ್ಯ ಜಲಸಂಪನ್ಮೂಲ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ರಾಜ್ಯ ಕಟ್ಟಡ ನಿರ್ಮಾಣ ನಿಗಮ ನಿಯಮಿತ, ಬೆಳಗಾವಿ, ಇಲ್ಲಿ ದಿನಗೂಲಿ ಆಧಾರದ ಮೇಲೆ ಜಲಸಂಪನ್ಮೂಲ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸುಮಾರು 1375 ನೌಕರರುಗಳನ್ನು ಖಾಯಂಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; | ಇಂತಹ ಯಾವುದೇ ನಿಗಮವು ಜಲ ಸಂಪನ್ಮೂಲ ಇಲಾಖೆಯ ಅಡಿಯಲ್ಲಿ ಇರುವುದಿಲ್ಲ. ಆದ್ದರಿಂದ ಪ್ರಶ್ನೆ ಉದ್ಭವಿಸುವುದಿಲ್ಲ |
| (ಆ) | ಸದರಿ ನೌಕರರುಗಳು ಕಳೆದ 15 ವರ್ಷಗಳಿಂದ ದಿನಗೂಲಿ ನೌಕರರುಗಳಾಗಿ ಕಾರ್ಯ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅನ್ವಯಿಸುವುದಿಲ್ಲ. |
| (ಇ) | ಹಾಗಿದ್ದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ಸಾಮಾನ್ಯ ವರ್ಗಗಳಿಗೆ ಸೇರಿದ ಈ ನೌಕರಗಳನ್ನು ಖಾಯಂಗೊಳಿಸಲು ಸರ್ಕಾರಕ್ಕಿರುವ ತೊಂದರೆಗಳೇನು | |
| (ಈ) | ಪಂಜಾಬ್ ಸರ್ಕಾರ ಮತ್ತು ಜಗಜೀತ್ ಸಿಂಗ್ ನಡುವಿನ ಸಿವಿಲ್ ಅಪಿಲ್‌ನ ತೀರ್ಪಿನಲ್ಲಿ ಸರ್ವೋಚ್ಚ ನ್ಯಾಯಾಲಯವು ದಿನಗೂಲಿ ನೌಕರರ ಸೇವೆಯನ್ನು ಖಾಯಂಗೊಳಿಸಿ ಸೇವಾಭದ್ರತೆ ಮತ್ತು ಆರ್ಥಿಕ ಸೌಲಭ್ಯಗಳನ್ನು ಕಲ್ಪಿಸುವಂತೆ ತೀರ್ಪು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಈ ಅಂಶಕ್ಕೆ ಸಂಬಂದಿಸಿದಂತೆ ಜಲಸಂಪನ್ಮೂಲ ಇಲಾಖೆಯಲ್ಲಿ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |
| (ಉ) | ಗುಜರಾತ್ ಸರ್ಕಾರ ಮತ್ತು ಲೋಕೋಪಯೋಗಿ ನೌಕರರ ಯೂನಿಯನ್ ನಡುವಿನ ವ್ಯಾಜ್ಯದ ತೀರ್ಪಿನಲ್ಲಿ ದಿನಗೂಲಿ ನೌಕರರಿಗೆ ರಜೆ, ಸೇವಾ ಭದ್ರತೆ ಹಾಗೂ ಇತರೆ ಸವಲತ್ತುಗಳನ್ನು ನೀಡುವಂತೆ ಸರ್ವೋಚ್ಚ ನ್ಯಾಯಾಲಯವು ತೀರ್ಪು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಈ ಅಂಶಕ್ಕೆ ಸಂಬಂಧಿಸಿದಂತೆ ಜಲಸಂಪನ್ಮೂಲ ಇಲಾಖೆಯಲ್ಲಿ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |

| | | |
|---|---|---|
| (ಊ) | ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪುಗಳನ್ವಯ ಮಾನವ ಹಕ್ಕುಗಳ ಆಯೋಗವು ದಿನಗೂಲಿ ನೌಕರರಿಗೆ ಸೇವಾ ಭದ್ರತೆ ಕಲ್ಪಿಸುವ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರಕ್ಕೆ ನೀಡಿರುವ ಸೂಚನೆಯ ಪ್ರಸ್ತಾವನೆಯು ಪ್ರಸ್ತುತ ಯಾವ ಹಂತದಲ್ಲಿದೆ;<br>(ಸಂಪೂರ್ಣ ಮಾಹಿತಿ ನೀಡುವುದು) | ಈ ಅಂಶಕ್ಕೆ ಸಂಬಂಧಿಸಿದಂತೆ ಜಲಸಂಪನ್ಮೂಲ ಇಲಾಖೆಯಲ್ಲಿ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |
| (ಋ) | ಹಿಮಾಚಲ ಪ್ರದೇಶ ಸರ್ಕಾರವು 5 ವರ್ಷಗಳ ಸೇವೆಯನ್ನು ಪೂರ್ಣಗೊಳಿಸಿರುವ ದಿನಗೂಲಿ ನೌಕರರ ಸೇವೆಯನ್ನು ಆಯಾ ಇಲಾಖೆಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ದಿನಗೂಲಿ ನೌಕರರ ಸೇವೆಯನ್ನು ಖಾಯಂಗೊಳಿಸಿ ಅಗತ್ಯ ಸೌಲಭ್ಯಗಳನ್ನು ಒದಗಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ಈ ಅಂಶಕ್ಕೆ ಸಂಬಂಧಿಸಿದಂತೆ ಜಲಸಂಪನ್ಮೂಲ ಇಲಾಖೆಯಲ್ಲಿ ಯಾವುದೇ ಪ್ರಸ್ತಾವನೆ ಇರುವುದಿಲ್ಲ. |
| ಎ) | ಅದರಂತೆಯೇ ಕರ್ನಾಟಕ ರಾಜ್ಯದ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 17.12.2019ರ ಆದೇಶ ಸಂಖ್ಯೆ: ಡಬ್ಲ್ಯೂಪಿ 869-875-877-880-882-883-885-902-904-909-911-965-971-999-2009 (ಎಸ್) ಆದೇಶದನದನ್ವಯ ದಿನಗೂಲಿ ನೌಕರರುಗಳನ್ನು ಖಾಯಂಗೊಳಿಸಲು ಆದೇಶ ಹೊರಡಿಸಿದ್ದರೂ ಸಹ ಸರ್ಕಾರ ಇದುವರೆವಿಗೂ ಕ್ರಮ ಕೈಗೊಳ್ಳದಿರಲು ಕಾರಣಗಳೇನು : | ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿ ಕರ್ನಾಟಕ ರಾಜ್ಯ ನಿರ್ಮಾಣ ನಿಗಮ ನಿಯಮಿತ ಬೆಂಗಳೂರು ನಿಗಮವನ್ನು ಸರ್ಕಾರದ ಆದೇಶ ಸಂಖ್ಯೆ: ಡಿಡಿಪಿಇಆರ್ 84 ಎಆರ್‌ಯು 2002 ದಿನಾಂಕ: 09.12.2003 ರಲ್ಲಿ ಮುಚ್ಚಲು ಆದೇಶ ಹೊರಡಿಸಿದ್ದು, ಇದನ್ನು ಪ್ರಶ್ನಿಸಿ ನಿಗಮದ ನೌಕರರು ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಡಬ್ಲ್ಯೂಪಿ 869-875-877-880-882-883-885-902-904-909-911-965-971-999-2009 (ಎಸ್) ನ್ನು ದಾಖಲಿಸಿರುತ್ತಾರೆ. ಸದರಿ ಪ್ರಕರಣದಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 17.12.2009 ರ ತೀರ್ಪಿನಲ್ಲಿ ಸದರಿ ಅರ್ಜಿಯನ್ನು ವಜಾಗೊಳಿಸಿರುತ್ತದೆ. ಆದ್ದರಿಂದ ಸದರಿ ತೀರ್ಪಿನನುಸಾರ ಖಾಯಂಗೊಳಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. |
| (ಏ) | ಮೇಲಿನ ಮಾನ್ಯ ಉಚ್ಚ ನ್ಯಾಯಾಲಯದ ಮತ್ತು ಸರ್ವೋಚ್ಚ ನ್ಯಾಯಾಲಯವು ನೀಡಿರುವ ತೀರ್ಪುಗಳ ಅನ್ವಯ ಈ ನೌಕರರುಗಳನ್ನು ಖಾಯಂಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ಹಾಗಿದ್ದಲ್ಲಿ, ಯಾವಾಗ ಖಾಯಂಗೊಳಿಸಲಾಗುವುದು ಮತ್ತು ಸೇವಾ ಭದ್ರತೆಯನ್ನು ಒದಗಿಸಲಾಗುವುದು. ಸಂಪೂರ್ಣ ಮಾಹಿತಿ ನೀಡುವುದು. | ಮೇಲಿನ (ಎ) ಅಂಶದಲ್ಲಿ ತಿಳಿಸಿರುವ ಮಾನ್ಯ ಉಚ್ಚ ನ್ಯಾಯಾಲಯದ ದಿನಾಂಕ: 17.12.2009ರ ತೀರ್ಪನ್ನು ಪ್ರಶ್ನಿಸಿ ನಿಗಮದ ನೌಕರರು ರಿಟ್ ಅಪೀಲ್ ಸಂಖ್ಯೆ: 2790/2010, 2081/2010 & 2489-2603/2010 ನ್ನು ದಾಖಲು ಮಾಡಿದ್ದು ಸದರಿ ಅರ್ಜಿಯನ್ನು ಮರುಪರಿಶೀಲಿಸಿದ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 08.08.2011 ರಂದು ನೀಡಿದ ತೀರ್ಪಿನಲ್ಲಿ ದಿನಾಂಕ: 17.12.2009ರ ತೀರ್ಪನ್ನು ವಜಾಗೊಳಿಸಿ ತೀರ್ಪಿನ ಕಂಡಿಕೆ 13 ರಲ್ಲಿ ಈ ಕೆಳಕಂಡಂತೆ ನಿರ್ದೇಶನ ನೀಡಿರುತ್ತದೆ. |

i)That the respondents must make all efforts to see that the process is completed on or before 31.01.2012;

**ii)That the appellants shall be continued in their respective posts till such time alternative arrangements for absorption of their service is made either in different Departments of Government or the creation of posts, by the Government i.e., Boards and Corporations.**

ಮಾನ್ಯ ಉಚ್ಚ ನ್ಯಾಯಾಲಯದ ಮೇಲ್ಕಂಡ ದಿನಾಂಕ : 08.08.2011ರ ತೀರ್ಪನ್ನು ಪ್ರಶ್ನಿಸಿ ರಾಜ್ಯ ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಎಸ್.ಎಲ್.ಪಿ ಅರ್ಜಿಯನ್ನು ಸಲ್ಲಿಸಿದ್ದು, ಸದರಿ ಎಸ್.ಎಲ್.ಪಿ ಅರ್ಜಿಯು ಸಿ.ಸಿ. ಸಂಖ್ಯೆ: 3014-3130/2012 ರಲ್ಲಿ ದಿನಾಂಕ: 21.02.2012 ರಂದು ಈ ಕೆಳಕಂಡಂತೆ ಮಧ್ಯಂತರ ತೀರ್ಪು ನೀಡಿರುತ್ತದೆ.

**ORDER**

Delay condoned.
Issue notice.
In the meantime, operation of direction contained in para 13 (ii) shall remain stayed.

ಪ್ರಸ್ತುತ ರಾಜ್ಯ ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಸಲ್ಲಿಸಿರುವ ಸಿವಿಲ್ ಅಪೀಲ್ ಅರ್ಜಿಯು ವಿಚಾರಣೆಗೆ ಬಾಕಿ ಇರುತ್ತದೆ. ಆದ್ದರಿಂದ, ಈ ಹಂತದಲ್ಲಿ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿ ಕರ್ನಾಟಕ ರಾಜ್ಯ ನಿರ್ಮಾಣ ನಿಗಮ ನಿಯಮಿತ, ಬೆಂಗಳೂರು ಇಲ್ಲಿನ ನೌಕರರನ್ನು ಖಾಯಂಗೊಳಿಸುವ ಪ್ರಸ್ತಾಪ ಇರುವುದಿಲ್ಲ. ಆದಾಗ್ಯೂ ಸದರಿ ನಿಗಮದ ಸೇವಾನಿರತ ನೌಕರರ ಸೇವೆಯನ್ನು ಕರ್ತವ್ಯ ವ್ಯವಸ್ಥೆಯ ಮೇರೆಗೆ ವಿವಿಧ ಇಲಾಖೆ/ ನಿಗಮಗಳಲ್ಲಿ ನೀಡಲಾಗಿದೆ.

ದಿನಗೂಲಿ ನೌಕರರ ಸಕ್ರಮಾತಿ ಕುರಿತು ಮಾನ್ಯ ನ್ಯಾಯಾಲಯದ ಸಂವಿಧಾನ ಪೀಠವು ಉಮಾದೇವಿ ಪ್ರಕರಣದಲ್ಲಿ ನೀಡಲಾದ ತೀರ್ಪಿನನ್ವಯ ಪರಿಶೀಲಿಸಿ ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ 2012 ನ್ನು ಜಾರಿಗೆ ತರಲಾಗಿದ್ದು, ಅದರಡಿ ಅರ್ಹ ದಿನಗೂಲಿ ನೌಕರರಿಗೆ ಸೇವಾ ಭದ್ರತೆ ಹಾಗೂ

| | | |
|---|---|---|
| | | ಸೌಲಭ್ಯಗಳನ್ನು ನೀಡಲಾಗಿದೆ. ಕೆ.ಎಸ್.ಸಿ.ಸಿ. ನಿಗಮದಲ್ಲಿ ಹಾಗೂ ಜಲಸಂಪನ್ಮೂಲ ಇಲಾಖೆಯ ಇತರೆ ನಿಗಮಗಳಲ್ಲಿ ಖಾಯಂಗೊಳಿಸಲಾಗಿರುವ ಬಗ್ಗೆ ಸರ್ಕಾರದ ವಿವಿಧ ಅಧಿಕಾರಿಗಳ ಸಹಿಯನ್ನು ಫೋರ್ಜರಿ ಮಾಡಿ ಆದೇಶಗಳನ್ನು ಹೊರಡಿಸಿದ್ದರಿಂದ ಈ ಬಗ್ಗೆ ವಿಧಾನಸೌಧ, ಪೋಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ತನಿಖೆ ಪ್ರಗತಿಯಲ್ಲಿರುತ್ತದೆ. |

ಸಂಖ್ಯೆ: ಜಸಂಇ 68 ಸೇಇಸಿ 2021

(ಡಿ. ಕೆ. ಶಿವಕುಮಾರ್ )
ಮಾನ್ಯ ಉಪಮುಖ್ಯಮಂತ್ರಿ